# ಸಹಕಾರಿಯ ಚುನಾವಣೆ ಕುರಿತು ಮಾಹಿತಿ.

ಸೌಹಾರ್ದ ಸಹಕಾರಿಗಳು ಹಾಗೂ ಸಹಕಾರ ಸಂಘಗಳ ಚುನಾವಣೆಯನ್ನು ನಡೆಸಲು ಸಹಕಾರ ಚುನಾವಣಾ ಪ್ರಾಧಿಕಾರವನ್ನು ರಚಿಸಲಾಗಿದೆ. ಸಹಕಾರಿಗಳ ಆಡಳಿತ ಮಂಡಲಿಯ ಸಾಮಾನ್ಯ ಚುನಾವಣೆ, ಪದಾಧಿಕಾರಿಗಳ ಚುನಾವಣೆ ಹಾಗೂ ಆಡಳಿತ ಮಂಡಲಿಯಲ್ಲಿ ಉಂಟಾಗುವ ಖಾಲಿಸ್ಥಾನಗಳ ಚುನವಣೆಗಳನ್ನು ಸಹಕಾರ ಚುನಾವಣಾ ಪ್ರಾಧಿಕಾರವು ನಡೆಸುತ್ತದೆ. ಸಹಕಾರ ಚುನಾವಣಾ ಪ್ರಾಧಿಕಾರದ ಮೇಲುಸ್ತುವಾರಿ, ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ಚುನಾವಣಾಧಿಕಾರಿಯು ತನ್ನ ಕಾರ್ಯವ್ಯಾಪ್ತಿಯೊಳಗೆ ನೋಂದಾಯಿತ ಮತ್ತು ವ್ಯವಹಾರದ ಪ್ರಧಾನ ಸ್ಥಳಗಳನ್ನುಳ್ಳ ಎಲ್ಲ ಸಹಕಾರಿಗಳ ಚುನಾವಣೆಗಳನ್ನು ನಡೆಸುತ್ತಾರೆ.

**ಸಹಕಾರ ಚುನಾವಣಾ ಪ್ರಾಧಿಕಾರದ ವಿಳಾಸ :**

**ಸಹಕಾರ ಚುನಾವಣಾ ಪ್ರಾಧಿಕಾರ,**
**3ನೇ ಮಹಡಿ, ಟಿಟಿಎಂಸಿ ಎ ಬ್ಲಾಕ್, ಕೆ. ಹೆಚ್. ರಸ್ತೆ,**
**ಶಾಂತಿ ನಗರ, ಬೆಂಗಳೂರು – 560027**
**ದೂರವಾಣಿ ಸಂಖ್ಯೆ : 080 22220055/22220066.**

ಸಹಕಾರಿಗಳ ಕಾರ್ಯವ್ಯಾಪ್ತಿಗಳಿಗೆ ಅನುಗುಣವಾಗಿ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಸಹಕಾರ ಚುನಾವಣಾ ಪ್ರಾಧಿಕಾರವು ಆದೇಶ ನೀಡಿರುತ್ತದೆ. ಸದರಿ ಆದೇಶದಂತೆ ಚುನಾವಣಾಧಿಕಾರಿಗಳ ವಿವರಗಳು ಈ ಕೆಳಗಿನಂತಿವೆ.

| ಕ್ರ. ಸಂ | ಜಿಲ್ಲೆಯ ಹೆಸರು | ಚುನಾವಣಾಧಿಕಾರಿಯಾಗಿ ನೇಮಿಸಲ್ಪಟ್ಟ ಅಧಿಕಾರಿ |
|---|---|---|
| 1 | ಬೆಂಗಳೂರು ನಗರ ಜಿಲ್ಲೆ | ಸಹಕಾರ ಸಂಘಗಳ ಜಂಟಿ ನಿಬಂಧಕರು, (ಪಟ್ಟಣ ಬ್ಯಾಂಕುಗಳ ವಿಭಾಗ) ಕೇಂದ್ರ ಬೆಂಗಳೂರು, ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು |
| 2 | ಬೆಂಗಳೂರು ಗ್ರಾಮಾಂತರ ಜಿಲ್ಲೆ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಬೆಂಗಳೂರು ಗ್ರಾಮಾಂತರ ಜಿಲ್ಲೆ |
| 3 | ರಾಮನಗರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ರಾಮನಗರ ಜಿಲ್ಲೆ |
| 4 | ತುಮಕೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ತುಮಕೂರು ಜಿಲ್ಲೆ |
| 5 | ಚಿತ್ರದುರ್ಗ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಚಿತ್ರದುರ್ಗ ಜಿಲ್ಲೆ |
| 6 | ದಾವಣೆಗೆರೆ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ದಾವಣಗೆರೆ ಜಿಲ್ಲೆ |
| 7 | ಶಿವಮೊಗ್ಗ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಶಿವಮೊಗ್ಗ ಜಿಲ್ಲೆ |
| 8 | ಕೋಲಾರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಕೋಲಾರ ಜಿಲ್ಲೆ |
| 9 | ಚಿಕ್ಕಬಳ್ಳಾಪುರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಚಿಕ್ಕಬಳ್ಳಾಪುರ ಜಿಲ್ಲೆ |

| | | |
|---|---|---|
| 10 | ಮೈಸೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಮೈಸೂರು ಜಿಲ್ಲೆ |
| 11 | ಚಾಮರಾಜನಗರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಚಾಮರಾಜನಗರ ಜಿಲ್ಲೆ |
| 12 | ಮಂಡ್ಯ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಮಂಡ್ಯ ಜಿಲ್ಲೆ |
| 13 | ಹಾಸನ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಹಾಸನ ಜಿಲ್ಲೆ |
| 14 | ಚಿಕ್ಕಮಗಳೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಚಿಕ್ಕಮಗಳೂರು ಜಿಲ್ಲೆ |
| 15 | ಕೊಡಗು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಕೊಡಗು ಜಿಲ್ಲೆ, ಮಡಿಕೇರಿ. |
| 16 | ದಕ್ಷಿಣಕನ್ನಡ ಜಿಲ್ಲೆ, ಮಂಗಳೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ದಕ್ಷಿಣಕನ್ನಡ ಜಿಲ್ಲೆ, ಮಂಗಳೂರು |
| 17 | ಉಡುಪಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರು, ಉಡುಪಿ ಜಿಲ್ಲೆ |
| 18 | ಬೆಳಗಾವಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಬೆಳಗಾವಿ ಜಿಲ್ಲೆ |
| 19 | ವಿಜಯಪುರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ವಿಜಯಪುರ ಜಿಲ್ಲೆ |
| 20 | ಬಾಗಲಕೋಟೆ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಬಾಗಲಕೋಟೆ ಜಿಲ್ಲೆ |
| 21 | ಧಾರವಾಡ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಧಾರವಾಡ ಜಿಲ್ಲೆ |
| 22 | ಹಾವೇರಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಹಾವೇರಿ ಜಿಲ್ಲೆ |
| 23 | ಗದಗ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಗದಗ ಜಿಲ್ಲೆ |
| 24 | ಉತ್ತರ ಕನ್ನಡ ಜಿಲ್ಲೆ, ಕಾರವಾರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಉತ್ತರ ಕನ್ನಡ ಜಿಲ್ಲೆ |
| 25 | ರಾಯಚೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ರಾಯಚೂರು ಜಿಲ್ಲೆ |
| 26 | ಕೊಪ್ಪಳ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಕೊಪ್ಪಳ ಜಿಲ್ಲೆ |

| | | |
|---|---|---|
| 27 | ಕಲಬುರಗಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಕಲಬುರಗಿ ಜಿಲ್ಲೆ |
| 28 | ಬಳ್ಳಾರಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಬಳ್ಳಾರಿ ಜಿಲ್ಲೆ |
| 29 | ಬೀದರ್ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು ಬೀದರ್ ಜಿಲ್ಲೆ |
| 30 | ಯಾದಗಿರಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು ಯಾದಗಿರಿ ಜಿಲ್ಲೆ |

**ಗಮನಿಸಿ : ಸಹಕಾರಿಯು ತಮ್ಮ ಕಾರ್ಯವ್ಯಾಪ್ತಿಗನುಗುಣವಾಗಿ ಈ ಮೇಲ್ಕಂಡಂತೆ ನೇಮಕವಾಗಿರುವ ಚುನಾವಣಾಧಿಕಾರಿಗೆ, ತಮ್ಮ ಸಹಕಾರಿಯ ಚುನಾವಣೆಯನ್ನು ನಡೆಸಲು ಅಗತ್ಯ ಕ್ರಮವಿಡುವಂತೆ ಹಾಗೂ ರಿಟರ್ನಿಂಗ್ ಅಧಿಕಾರಿ ನೇಮಕ ಮಾಡಿಕೊಡುವಂತೆ ಪತ್ರವನ್ನು ಬರೆಯಬೇಕಾಗುತ್ತದೆ ಹಾಗೂ ಅದರ ಪ್ರತಿಯನ್ನು ಚುನಾವಣಾ ಪ್ರಾಧಿಕಾರಕ್ಕೆ ಕಳುಹಿಸಬೇಕಾಗುತ್ತದೆ.**

## ಚುನಾವಣೆಗೆ ಸಂಬಂಧಿಸಿದಂತೆ ಸಹಕಾರಿಯು ತಿಳಿದಿರಬೇಕಾದ ಮಾಹಿತಿ :

1. ಸಹಕಾರಿಯ ನಿರ್ಗಮಿಸುತ್ತಿರುವ ಮಂಡಳಿಯ ಪದಾವಧಿ ಮುಕ್ತಾಯವಾಗುವುದಕ್ಕೆ ಮೊದಲು, ಮುಂದಿನ ಮಂಡಳಿಯನ್ನು ಚುನಾಯಿಸಲು ಚುನಾವಣೆಯನ್ನು ನಡೆಸತಕ್ಕದ್ದು. ಹೊಸದಾಗಿ ಚುನಾಯಿತರಾದ ನಿರ್ದೇಶಕರುಗಳು, ನಿರ್ಗಮಿಸುತ್ತಿರುವ ನಿರ್ದೇಶಕರುಗಳ ಪದಾವಧಿ ಮುಕ್ತಾಯವಾದ ಕೂಡಲೇ ಪದಧಾರಣ ಮಾಡತಕ್ಕದ್ದು. ಮಂಡಲಿಯ ಪದಾವಧಿಯು ಚುನಾವಣೆಯ ದಿನಾಂಕದಿಂದ ಐದು ವರ್ಷಗಳು.
2. ಸಹಕಾರಿಯ ನಿರ್ಗಮಿಸುತ್ತಿರುವ ಮಂಡಳಿಯ ಪದಾವಧಿ ಮುಕ್ತಾಯವಾಗುವುದಕ್ಕೆ ಕನಿಷ್ಠ 06 ತಿಂಗಳು ಮೊದಲು, ಸಹಕಾರಿಯ ಮುಖ್ಯಕಾರ್ಯನಿರ್ವಾಹಕನು ಆಡಳಿತ ಮಂಡಲಿ ಸಭೆಯ ನಿರ್ಣಯದೊಂದಿಗೆ ಸಹಕಾರಿಯ ಚುನಾವಣೆ ನಡೆಸುವ ಕುರಿತು ತಮ್ಮ ಕಾರ್ಯವ್ಯಾಪ್ತಿಗೆ ಸಂಬಂಧಿಸಿದ ಚುನಾವಣಾಧಿಕಾರಿಗೆ ಹಾಗೂ ಚುನಾವಣಾ ಪ್ರಾಧಿಕಾರಕ್ಕೆ ಪತ್ರವನ್ನು ಕಳುಹಿಸಬೇಕು.
3. ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕನು ಇಂದೀಕರಿಸಲ್ಪಟ್ಟ ಸದಸ್ಯತ್ವ ರಿಜಿಸ್ಟರಿನಲ್ಲಿ ದಾಖಲಿಸಲಾದ ನಮೂದುಗಳ ಆಧಾರದ ಮೇಲೆ ಚುನಾವಣೆಯಲ್ಲಿ ಮತನೀಡುವ ಹಕ್ಕುಳ್ಳ ಸದಸ್ಯರ ಹಾಗೂ ಸದಸ್ಯ ಸಹಕಾರಿಗಳ ಮತ ನೀಡುವ ಹಕ್ಕುಳ್ಳ ಡೆಲಿಗೇಟುಗಳ ಕರಡು ಅರ್ಹತಾಪಟ್ಟಿಯನ್ನು, ಸಹಕಾರಿಯ ಸುಸ್ತಿದಾರರ ಕರಡು ಪಟ್ಟಿ ಹಾಗೂ ಚುನಾವಣೆಯಲ್ಲಿ ಮತದಾನದ ಹಕ್ಕನ್ನು ಹೊಂದಿರದ ಇತರ ಸದಸ್ಯರ /ಪ್ರತಿನಿಧಿ/ಡೆಲಿಗೇಟುಗಳ ಕರಡು ಪಟ್ಟಿಗಳನ್ನು ತಯಾರಿಸತಕ್ಕದ್ದು. ಮತ್ತು ಅಂಥ ಪಟ್ಟಿಗಳನ್ನು ಅಂಥ ಇಂದೀಕರೀಸಿದ ದಾಖಲೆಗಳ ಮತ್ತು ರಿಜಿಸ್ಟರುಗಳ ಸಹಿತ ಚುನಾವಣಾಧಿಕಾರಿಯ ವಶಕ್ಕೆ ಒಪ್ಪಿಸತಕ್ಕದ್ದು.
4. ಸಹಕಾರ ಚುನಾವಣಾ ಪ್ರಾಧಿಕಾರವು, ಚುನಾವಣಾಧಿಕಾರಿಯಿಂದ ಸಾಮಾನ್ಯ ಚುನಾವಣೆಗಳು ಸನ್ನಿಹಿತವಾಗಿರುವ ಸಹಕಾರಿಗಳ ಪಟ್ಟಿಯನ್ನೊಳಗೊಂಡ ವರದಿಗಳು ಸ್ವೀಕೃತವಾದ ನಂತರ, ಪ್ರತಿ ಸಹಕಾರಿಯ ಹೆಸರು ಮತ್ತು ವಿಳಾಸ ಹಾಗೂ ಸಾಮಾನ್ಯ ಚುನಾವಣೆಯ ದಿನಾಂಕ ಮತ್ತು ಸ್ಥಳಗಳನ್ನು ತಿಳಿಸುವ, ಆಡಳಿತ ಮಂಡಳಿಗಳ ಸಾಮಾನ್ಯ ಚುನಾವಣೆಗಳನ್ನು ನಡೆಸುವ ಮತ್ತು ಮತದಾರರ ಪಟ್ಟಿಗಳನ್ನು ತಯಾರಿಸುವ ಸಂಬಂಧದಲ್ಲಿ ವೇಳಾಪಟ್ಟಿಗಳನ್ನು ಚುನಾವಣೆ ದಿನಾಂಕಕ್ಕೆ ಹದಿನೈದು ದಿನಗಳ ಪೂರ್ವದಲ್ಲಿ ಪ್ರಕಟಿಸುತ್ತದೆ.
5. ಮತ ನೀಡುವ ಹಕ್ಕುಳ್ಳ /ಸುಸ್ತಿದಾರರ ಹಾಗೂ ಸುಸ್ತಿಯಾಗುವವರ ಕರಡು ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ ಕನಿಷ್ಠ ನಲವತ್ತೈದು ದಿನಗಳ ಮುಂಚಿತವಾಗಿ ಪ್ರಕಟಿಸಿ, ಆಕ್ಷೇಪಣೆ ಕರೆಯಲಾಗುತ್ತದೆ. ಇದಕ್ಕೆ ಅಗತ್ಯವಾದ ನೈಜ ಮಾಹಿತಿಯನ್ನು ಪ್ರತಿ ಸಹಕಾರಿಯು ಚುನಾವಣಾಧಿಕಾರಿಗೆ ಒದಗಿಸತಕ್ಕದ್ದು.
6. ಅಂತಿಮ ಅರ್ಹ ಮತದಾರರ ಪಟ್ಟಿಯನ್ನು ಚುನಾವಣಾ ದಿನಾಂಕಕ್ಕೆ ಹದಿನೈದು ದಿನಗಳ ಪೂರ್ವದಲ್ಲಿ ಸಂಬಂಧಪಟ್ಟ ಸಹಕಾರಿಯ ಸೂಚನಾಫಲಕದಲ್ಲಿ ಹಾಗೂ ಸಹಕಾರ ಇಲಾಖೆಯ ಸ್ಥಳೀಯ ಅಧಿಕಾರಿಯ ಸೂಚನಾಫಲಕದಲ್ಲಿ ಪ್ರಕಟಿಸಲಾಗುತ್ತದೆ. ಪ್ರತಿ ಸಹಕಾರಿಯು ಅಂಥ ಮತದಾರರ ಪಟ್ಟಿಯ ಪ್ರತಿಯನ್ನು ಅಂಥ ಸಹಕಾರಿಯ ಕಚೇರಿಯಲ್ಲಿ ಮತ್ತು ಜಿಲ್ಲಾ ಚುನಾವಣಾಧಿಕಾರಿಯ ಕಚೇರಿಯಲ್ಲಿ ವೀಕ್ಷಣೆಗೆ ಮುಕ್ತವಾಗಿಟ್ಟಿರತಕ್ಕದ್ದು.

7. ಸಹಕಾರಿಗಳ ಪ್ರತಿನಿಧಿ ಚುನಾವಣೆ ಅಥವಾ ಆಡಳಿತ ಮಂಡಳಿಯ ನಿರ್ದೇಶಕರ ಚುನಾವಣೆ ಅಥವಾ ಪದಾಧಿಕಾರಿಗಳ ಚುನಾವಣೆ ಅಥವಾ ಪ್ರತಿನಿಧಿ/ನಿರ್ದೇಶಕರ/ಪದಾಧಿಕಾರಿಗಳ ಆಕಸ್ಮಿಕ ರಿಕ್ತ ಸ್ಥಾನಗಳಿಗೆ ಚುನಾವಣೆ ನಡೆಸಲು ಸಹಕಾರ ಚುನಾವಣಾ ಪ್ರಾಧಿಕಾರವು ರಿಟರ್ನಿಂಗ್ ಅಧಿಕಾರಿ ಮತ್ತು ಅವಶ್ಯವಿದ್ದಷ್ಟು ಸಹಾಯಕ ರಿಟರ್ನಿಂಗ್ ಅಧಿಕಾರಿಗಳನ್ನು ನೇಮಿಸುತ್ತದೆ.
8. ತಮ್ಮ ಸಹಕಾರಿಯ ಚುನಾವಣೆಗೆ ಸಂಬಂಧಿಸಿದಂತೆ ನೇಮಕವಾದ ರಿಟರ್ನಿಂಗ್ ಅಧಿಕಾರಿಯು ನಿರ್ದೇಶಕರ ಚುನಾವಣೆಯ ಉದ್ದೇಶಕ್ಕಾಗಿ ಚುನಾವಣಾ ವೇಳಾಪಟ್ಟಿಯನ್ನು ಸಾಮಾನ್ಯ ಚುನಾವಣಾ ದಿನಾಂಕದ ಕನಿಷ್ಠ ಹದಿನೈದು ದಿನಗಳ ಪೂರ್ವದಲ್ಲಿ ಪ್ರಕಟಿಸುತ್ತಾರೆ.
9. ರಿಟರ್ನಿಂಗ್ ಅಧಿಕಾರಿಯ ಅಥವಾ ಸಹಾಯಕ ರಿಟರ್ನಿಂಗ್ ಅಧಿಕಾರಿಯ ಸಹಿಯಲ್ಲಿ ಸಾಮಾನ್ಯ ಚುನಾವಣೆಯ ನೋಟಿಸನ್ನು ಚುನಾವಣಾ ವೇಳಾಪಟ್ಟಿ ಸಹಿತ ಎಲ್ಲಾ ಅರ್ಹ ಸದಸ್ಯರಿಗೆ ಕಳುಹಿಸಬೇಕಾಗುತ್ತದೆ. ಹಾಗೂ ಚುನಾವಣಾ ವೇಳಾಪಟ್ಟಿಯ ಸಹಿತ ಸಾಮಾನ್ಯ ಚುನಾವಣಾ ನೋಟಿಸನ್ನು ಸಹಕಾರಿಯ ಮತ್ತು ಅದರ ಶಾಖೆಗಳ ಸೂಚನಾಫಲಕಗಳಲ್ಲಿ, ರಿಟರ್ನಿಂಗ್ ಅಧಿಕಾರಿಯ ಕಚೇರಿಯ ಸೂಚನಾಫಲಕದಲ್ಲಿ ಮತ್ತು ಜಿಲ್ಲಾ ಚುನಾವಣಾಧಿಕಾರಿಯ ಸೂಚನಾಫಲಕದಲ್ಲಿ ಪ್ರಕಟಿಸತಕ್ಕದ್ದು.
10. ಸಹಕಾರಿಯ ಮುಖ್ಯಕಾರ್ಯನಿರ್ವಾಹಕನು ಚುನಾವಣೆ ಸಂಬಂಧದಲ್ಲಿ ರಿಟರ್ನಿಂಗ್ ಅಧಿಕಾರಿ ಅಪೇಕ್ಷಿಸುವ ಸೂಕ್ತವಾದ ಸಹಾಯ ಮತ್ತು ನೆರವನ್ನು ಒದಗಿಸತಕ್ಕದ್ದು. ಸಹಕಾರಿಯ ನಿರ್ದೇಶಕರ ಸಾಮಾನ್ಯ ಚುನಾವಣೆಗೆ ಸಂಬಂಧಪಟ್ಟಂತೆ ತಗಲುವ ಲೇಖನಸಾಮಗ್ರಿ, ಮುದ್ರಣ, ಅಂಚೆ, ಜೆರಾಕ್ಸ್, ಫ್ಯಾಕ್ಸ್, ಮತಪೆಟ್ಟಿಗೆಗಳ ಬಾಡಿಗೆ, ಅಳಿಸಲಾಗದ ಇಂಕು, ಪೋಲಿಸ್ ಭದ್ರತೆ ಮತ್ತು ಅಂಥ ಇತರ ಎಲ್ಲಾ ವೆಚ್ಚಗಳನ್ನು ಆ ಸಹಕಾರಿಯು ಭರಿಸತಕ್ಕದ್ದು. ಸಹಕಾರ ಚುನಾವಣಾ ಪ್ರಾಧಿಕಾರವು ಕಾಲಕಾಲಕ್ಕೆ ನಿಗದಿಪಡಿಸುವ ದರಗಳಲ್ಲಿ ಮತದಾರರ ಪಟ್ಟಿ ತಯಾರಿಕೆಗೆ, ರಿಟರ್ನಿಂಗ್ ಅಧಿಕಾರಿ, ಸಹಾಯಕ ರಿಟರ್ನಿಂಗ್ ಅಧಿಕಾರಿ, ಪ್ರಿಸೈಡಿಂಗ್ ಅಧಿಕಾರಿ ಮತ್ತು ಇತರ ಚುನಾವಣಾ ಸಿಬ್ಬಂದಿಗೆ ಕೊಡಬೇಕಾದ ಪ್ರಯಾಣ ಭತ್ಯೆ ಮತ್ತು ಇತರ ಭತ್ಯೆಗಳನ್ನು ಮತ್ತು ಸಂಭಾವನೆಯನ್ನೂ ಸಹ ಸಹಕಾರಿಯೇ ಭರಿಸತಕ್ಕದ್ದು. ಈ ಬಗ್ಗೆ ಚುನಾವಣಾ ಪ್ರಾಧಿಕಾರವು ಹೊರಡಿಸಿರುವ ಸುತ್ತೋಲೆಯನ್ನು ಗಮನಿಸುವುದು.
11. ಚುನಾವಣೆಯಲ್ಲಿ ಉಪಯೋಗಿಸಿದ ಎಲ್ಲಾ ಮತಪೆಟ್ಟಿಗೆಗಳನ್ನು ಮತ್ತು ಎಲ್ಲಾ ದಾಖಲೆಗಳನ್ನು ಸಹಕಾರ ಚುನಾವಣಾ ಪ್ರಾಧಿಕಾರವು ನಿರ್ದೇಶಿಸಬಹುದಾದಂಥ ಸಂರಕ್ಷಣೆಯಲ್ಲಿ ಇಡತಕ್ಕದ್ದು. ಸಹಕಾರಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಯು ತನ್ನ ಸಂರಕ್ಷಣೆಯಲ್ಲಿರುವಾಗ ನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ದಾಖಲೆಗಳನ್ನು ಹೊರತುಪಡಿಸಿ ಸಹಕಾರ ಚುನಾವಣಾ ಪ್ರಾಧಿಕಾರವು ನಿರ್ದೇಶಿಸಬಹುದಾದಂಥ ಷರತ್ತುಗಳಿಗೆ ಮತ್ತು ಅಂಥ ಶುಲ್ಕದ ಸಂದಾಯಕ್ಕೆ ಒಳಪಟ್ಟು ಚುನಾವಣೆಗೆ ಸಂಬಂಧಪಟ್ಟ ಎಲ್ಲ ಇತರ ಕಾಗದ ಪತ್ರಗಳು ಸದಸ್ಯರ ಪರಿಶೀಲನೆಗೆ ಮುಕ್ತವಾಗಿರತಕ್ಕದ್ದು; ಮತ್ತು ಲಿಖಿತ ಕೋರಿಕೆಯ ಮೇರೆಗೆ ಅವುಗಳ ಪ್ರತಿಗಳನ್ನು ಒದಗಿಸತಕ್ಕದ್ದು.

### ಸಹಕಾರಿಯಲ್ಲಿ ಉದ್ಭವಿಸುವ ಆಕಸ್ಮಿಕ ಖಾಲಿ ಸ್ಥಾನದ ಚುನಾವಣೆ ಕುರಿತು :

1. ಯಾವುದೇ ಸಹಕಾರಿಯ ನಿರ್ದೇಶಕ/ಪ್ರತಿನಿಧಿಯ ಪದದಲ್ಲಿ ಆಕಸ್ಮಿಕ ರಿಕ್ತತೆ ಉಂಟಾದಲ್ಲಿ, ಆ ಸಹಕಾರಿಯ ಮುಖ್ಯಕಾರ್ಯನಿರ್ವಾಹಕನು ಅಂಥ ರಿಕ್ತತೆಯು ಅಧಿಕೃತವಾಗಿ ತಿಳಿಯಲ್ಪಟ್ಟ ಹದಿನೈದು ದಿನಗಳ ಒಳಗಾಗಿ, ಕಡ್ಡಾಯವಾಗಿ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಅಂತಹ ರಿಕ್ತತೆಯು ಉಂಟಾಗಿರುವ ಮಾಹಿತಿಯನ್ನು ಸಲ್ಲಿಸತಕ್ಕದ್ದು.
2. ಒಂದು ವೇಳೆ ಆಡಳಿತ ಮಂಡಳಿಯ ಉಳಿದ ಪದಾವಧಿಯು ತನ್ನ ಮೂಲ ಪದಾವಧಿಯ ಅರ್ಧಕ್ಕಿಂತ ಕಡಿಮೆ ಉಳಿದಿದ್ದಲ್ಲಿ, ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕನು ಆಡಳಿತ ಮಂಡಳಿಯ ಅನುಮೋದನೆಯೊಂದಿಗೆ ಅಂತಹ ಆಕಸ್ಮಿಕ ರಿಕ್ತತೆಯನ್ನು ಅಧಿನಿಯಮದಲ್ಲಿನ ಪ್ರಕರಣ 29 ರಡಿಯಲ್ಲಿ ಸಹಮತದ ಮೂಲಕ ಭರ್ತಿ ಮಾಡಿಕೊಳ್ಳಲಾಗುವುದೇ ಅಥವಾ ಚುನಾವಣೆ ಮೂಲಕ ಭರ್ತಿ ಮಾಡಿಕೊಳ್ಳಲಾಗುವುದೇ ಎಂದು ಸ್ಪಷ್ಟವಾಗಿ, ಅಂತಹ ಆಕಸ್ಮಿಕ ರಿಕ್ತತೆಯು ಅಧಿಕೃತವಾಗಿ ತಿಳಿಯಲ್ಪಟ್ಟ ದಿನಾಂಕದಿಂದ ಮೂವತ್ತು ದಿನಗಳೊಳಗೆ, ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು.
3. ಸಹಕಾರಿಯು ಅಧಿನಿಯಮದಲ್ಲಿನ ಪ್ರಕರಣ 29 ರಡಿಯಲ್ಲಿ ಆಕಸ್ಮಿಕ ರಿಕ್ತತೆಗಳನ್ನು ಸಹಮತದ ಮೂಲಕ ಭರ್ತಿ ಮಾಡಿಕೊಳ್ಳಲು ತೀರ್ಮಾನಿಸಿದಲ್ಲಿ, ಅಂತಹ ಪ್ರಕ್ರಿಯೆಯನ್ನು ಅಂತಹ ಆಕಸ್ಮಿಕ ರಿಕ್ತತೆಯು ಅಧಿಕೃತವಾಗಿ ತಿಳಿಯಲ್ಪಟ್ಟ ದಿನಾಂಕದಿಂದ ಅರವತ್ತು ದಿನಗಳೊಳಗೆ ಪೂರ್ಣಗೊಳಿಸತಕ್ಕದ್ದು.
4. ಇಲ್ಲದಿದ್ದಲ್ಲಿ, ಮತ್ತು ಉಳಿದ ಎಲ್ಲಾ ಸಂದರ್ಭಗಳಲ್ಲಿ, ಸಹಕಾರ ಚುನಾವಣಾ ಪ್ರಾಧಿಕಾರವು ಖಾಲಿ ಬಿದ್ದ ನಿರ್ದೇಶಕ/ಪ್ರತಿನಿಧಿ ಹುದ್ದೆಗಳಿಗೆ ಖಾಲಿ ಬಿದ್ದ ತೊಂಭತ್ತು ದಿನಗಳ ಒಳಗಾಗಿ ರಿಕ್ತ ಸ್ಥಾನಗಳನ್ನು ಭರ್ತಿ ಮಾಡಲು ಚುನಾವಣೆ ನಡೆಸತಕ್ಕದ್ದು.

## ಪದಾಧಿಕಾರಿಗಳ ಚುನಾವಣೆ ಕುರಿತು :

1. ಆಡಳಿತ ಮಂಡಳಿಯ ನಿರ್ದೇಶಕರ ಸಾಮಾನ್ಯ ಚುನಾವಣೆಯನ್ನು ನಡೆಸಲು ನೇಮಕವಾದ ರಿಟರ್ನಿಂಗ್ ಅಧಿಕಾರಿಯು ಪದಾಧಿಕಾರಿಗಳ ಚುನಾವಣೆಯನ್ನು ನಡೆಸಲು ರಿಟರ್ನಿಂಗ್ ಅಧಿಕಾರಿಯಾಗಿರತಕ್ಕದ್ದು.
2. ಅಧ್ಯಕ್ಷ ಅಥವಾ ಉಪಾಧ್ಯಕ್ಷ ಅಥವಾ ಇತರ ಯಾವುದೇ ಪದಾಧಿಕಾರಿಯ ಪದದಲ್ಲಿ, ಅನರ್ಹತೆ ಅಥವಾ ಮರಣ ಅಥವಾ ರಾಜೀನಾಮೆ ಅಥವಾ ಇತರ ಯಾವುದೇ ಕಾರಣಗಳಿಂದಾಗಿ, ಆಕಸ್ಮಿಕ ರಿಕ್ತತೆ ಉಂಟಾದಲ್ಲಿ, ಆಡಳಿತ ಮಂಡಳಿ ಮತ್ತು ಮುಖ್ಯಕಾರ್ಯನಿರ್ವಾಹಕನು ಅಂಥ ರಿಕ್ತತೆ ಉಂಟಾದ ಏಳು ದಿನಗಳೊಳಗೆ ಆಕಸ್ಮಿಕ ರಿಕ್ತತೆ ಉಂಟಾಗಿರುವ ಬಗ್ಗೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಹಾಗೂ ಚುನಾವಣಾಧಿಕಾರಿಗೆ ವರದಿ ಕಳುಹಿಸತಕ್ಕದ್ದು.
3. ಚುನಾವಣಾಧಿಕಾರಿಯು ಪ್ರಸಂಗಾನುಸಾರ ಅಧ್ಯಕ್ಷ ಅಥವಾ ಉಪಾಧ್ಯಕ್ಷ ಪದದಲ್ಲಿ ಉಂಟಾಗಿರುವ ಆಕಸ್ಮಿಕ ರಿಕ್ತತೆಯನ್ನು ಭರ್ತಿ ಮಾಡಲು ಚುನಾವಣೆ ನಡೆಸುವ ಉದ್ದೇಶಕ್ಕಾಗಿ ಒಬ್ಬ ರಿಟರ್ನಿಂಗ್ ಅಧಿಕಾರಿಯನ್ನು ನೇಮಿಸತಕ್ಕದ್ದು.
4. ರಿಟರ್ನಿಂಗ್ ಅಧಿಕಾರಿಯು ಹದಿನೈದು ದಿನಗಳೊಳಗಾಗಿ ಪದಾಧಿಕಾರಿಗಳನ್ನು ಚುನಾಯಿಸಲು ಆಡಳಿತ ಮಂಡಳಿಯ ಮತ ನೀಡುವ ಅರ್ಹತೆಯಿರುವ ನಿರ್ದೇಶಕರುಗಳ ಸಭೆಯನ್ನು ಕರೆಯತಕ್ಕದ್ದು. ಅಂಥ ಸಭೆಯನ್ನು ಸಭೆಯ ಸ್ಥಳ, ದಿನಾಂಕ ಮತ್ತು ವೇಳೆಯನ್ನುಳ್ಳ ಏಳು ಸ್ಪಷ್ಟ ದಿನಗಳ ನೋಟೀಸನ್ನು ರಿಜಿಸ್ಟರ್ಡ್ ಅಂಚೆಯ ಮೂಲಕ ನೀಡಿ ಕರೆಯತಕ್ಕದ್ದು.
5. ರಿಟರ್ನಿಂಗ್ ಅಧಿಕಾರಿಯು, ಪದಾಧಿಕಾರಿಗಳನ್ನು ಚುನಾಯಿಸುವ ಉದ್ದೇಶಕ್ಕಾಗಿ ಕರೆದ ಆಡಳಿತ ಮಂಡಳಿಯ ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು. ಚುನಾವಣೆಯು ರಹಸ್ಯ ಮತದಾನದ ಮೂಲಕ ನಡೆಯತಕ್ಕದ್ದು. ಎರಡು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನ ಮತ ಗಳಿಸಿದಲ್ಲಿ ಚೀಟಿ ಎತ್ತುವ ಮೂಲಕ ವಿಜೇತರನ್ನು ಆಯ್ಕೆ ಮಾಡತಕ್ಕದ್ದು.
6. ಚುನಾವಣೆ ಪ್ರಕ್ರಿಯೆ ಮುಗಿದ ನಂತರ ಹದಿನೈದು ದಿನಗಳೊಳಗೆ ಚುನಾವಣೆಯ ವರದಿಯನ್ನು, ಆಯ್ಕೆಯಾದ ಆಡಳಿತ ಮಂಡಳಿ ಸದಸ್ಯರ ಪಟ್ಟಿ, ಅವರ ವಿಳಾಸ, ದೂರವಾಣಿ ಸಂಖ್ಯೆ, ಪದಾಧಿಕಾರಿಗಳ ವಿವರ ಇತ್ಯಾದಿಗಳೊಂದಿಗೆ ಸಂಯುಕ್ತ ಸಹಕಾರಿಗೆ ಸಲ್ಲಿಸತಕ್ಕದ್ದು.

**ಗಮನಿಸಿ : ಸಹಕಾರಿಯ ಆಡಳಿತ ಮಂಡಲಿ ಚುನಾವಣೆ, ಪದಾಧಿಕಾರಿಗಳ ಚುನಾವಣೆ, ಆಕಸ್ಮಿಕ ರಿಕ್ತತೆ ತುಂಬುವುದು ಇವುಗಳ ಕುರಿತು ಕ್ರಮವಾಗಿ ಸೌಹಾರ್ದ ಸಹಕಾರಿ ಅಧಿನಿಯಮ ಪ್ರಕರಣ 26, 28, 29ರಲ್ಲಿ ಮತ್ತು ಸೌಹಾರ್ದ ಸಹಕಾರಿ ನಿಯಮಗಳು ಸಂಖ್ಯೆ 05 & 06ರಲ್ಲಿ ವಿವರವಾಗಿ ಹೇಳಲಾಗಿದ್ದು, ಗಮನಿಸಲು ತಿಳಿಸಿದೆ.**